**All India Radio: Bangalore**
**National Bulletin In Kannada**
**05.06.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.06.2025 1.10 p.m.**

**<><><><>**

ಮುಖ್ಯಾಂಶಗಳು

1. ಬಡತನದಿಂದ ಜನರನ್ನು ಮೇಲೆತ್ತಲು ಕೇಂದ್ರ ಸರ್ಕಾರದಿಂದ ಹಲವು ಮಹತ್ವದ ಉಪಕ್ರಮ
2. ವಿಶ್ವ ಪರಿಸರ ದಿನ - ದೆಹಲಿಯಲ್ಲಿ ವಿಶೇಷ ಮರನೆಡುವ ಅಭಿಯಾನಕ್ಕೆ ಚಾಲನೆ ನೀಡಿದ ಪ್ರಧಾನಿ ನರೇಂದ್ರಮೋದಿ
3. ಅಂತಾರಾಷ್ಟ್ರೀಯ ಯೋಗ ದಿನ: ಪ್ರಧಾನ ಕಾರ್ಯಕ್ರಮ ಯೋಗ ಸಂಗಮದಲ್ಲಿ ಭಾಗವಹಿಸಲು ೩೦ಸಾವಿರಕ್ಕೂ ಅಧಿಕ ಸಂಘಟನೆಗಳ ನೋಂದಣಿ
4. ಬಹುನಿರಿಕ್ಷೀತ ಕಾಶ್ಮೀರ ರೈಲು ಸೇವೆಗಳಿಗೆ ನಾಳೆ ಚಾಲನೆ ನೀಡಲಿರುವ ಪ್ರದಾನಮಂತ್ರಿ ಬೆಂಗಳೂರಿನಲ್ಲಿ ಕಾಲ್ತುಳಿತ ಪ್ರಕರಣ - ಹೈಕೋರ್ಟ್‌ನಿಂದ ಸ್ವಯಂ ಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ ದಾಖಲು

<><><><>

ಬಡತನದಿಂದ ಜನರನ್ನು ಮೇಲೆತ್ತಲು ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಮತ್ತು ಜನರ ಸಬಲೀಕರಣ, ಮೂಲ ಸೌಕರ್ಯ ವೃದ್ಧಿ ಹಾಗೂ ಎಲ್ಲರನ್ನೂ ಒಳಗೊಳ್ಳುವುದಕ್ಕೆ ಒತ್ತು ನೀಡಲಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರಮೋದಿ ಹೇಳಿದ್ದಾರೆ. ಅವರು, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸರ್ವರಿಗೂ ವಸತಿ, ಶುದ್ಧ ಅಡುಗೆ ಅನಿಲ, ಬ್ಯಾಂಕಿಂಗ್ ಮತ್ತು ಆರೋಗ್ಯ ಸೇವೆಗಳನ್ನು ನೀಡಲು ಕೈಗೊಂಡಿರುವ ಪಿಎಂ ಆವಾಸ್ ಯೋಜನೆ, ಪಿಎಂ ಉಜ್ವಲಾ ಯೋಜನೆ , ಜನಧನ್ ಯೋಜನೆ ಮತ್ತು ಆಯುಷ್ಮಾನ್ ಭಾರತ್ ಮತ್ತಿತ್ತರ ಉಪಕ್ರಮಗಳ ಬಗ್ಗೆ ಪ್ರಸ್ತಾಪಿಸಿದ್ದಾರೆ. ಅಲ್ಲದೆ, ನೇರನಗದು ವರ್ಗಾವಣೆಗೆ ಒತ್ತು ನೀಡಿರುವುದು, ಡಿಜಿಟಲ್ ಒಳಗೊಳ್ಳುವಿಕೆ ಮತ್ತು ಗ್ರಾಮೀಣ ಮೂಲಸೌಕರ್ಯಕ್ಕೆ ಆದ್ಯತೆ ನೀಡುವ ಮೂಲಕ ಪಾರದರ್ಶಕತೆಯನ್ನು ಮತ್ತು ಕಟ್ಟ ಕಡೆಯ ಫಲಾನುಭವಿಯನ್ನು ಸುಲಭವಾಗಿ ತಲುಪಲು ಸಾಧ್ಯವಾಗುತ್ತಿದೆ ಎಂದು ಪ್ರಧಾನಿ ಹೇಳಿದ್ದಾರೆ. ಸರ್ಕಾರದ ಉಪಕ್ರಮಗಳಿಂದಾಗಿ ಸುಮಾರು ೨೫ಕೋಟಿ ಜನರು ಬಡತನವನ್ನು

ಸೋಲಿಸಿದ್ದಾರೆ ಎಂದು ಅವರು  ಎಲ್ಲರನ್ನೂ ಒಳಗೊಂಡ ಸ್ವಾವಲಂಭಿ ಭಾರತ ನಿರ್ಮಾಣಕ್ಕೆ ಸರ್ಕಾರ ಬದ್ಧವಿದೆ ಆ ಮೂಲಕ ಪ್ರತಿಯೊಬ್ಬ ಪ್ರಜೆಗೂ ಉತ್ತಮ ಹಾಗೂ ಗೌರವಯುತ ಜೀವನ ನಡೆಸಲು ಅವಕಾಶವನ್ನು ಒದಗಿಸಲಾಗುತ್ತಿದೆ ಎಂದು ಪ್ರದಾನಿ ನರೇಂದ್ರಮೋದಿ ತಿಳಿಸಿದ್ದಾರೆ.

<><><><>

ವಿಶ್ವ ಪರಿಸರ ದಿನವಾದ ಇಂದು ತಾಯಿ ಹೆಸರಿನಲ್ಲಿ ಒಂದು ಗಿಡ ನೆಡಿ ಉಪಕ್ರಮದ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ದೆಹಲಿಯ ಭಗವಾನ್ ಮಹಾವೀರ್ ವನಸ್ಥಳಿ ಉದ್ಯಾನವನದಲ್ಲಿ ವಿಶೇಷ ಮರ ನೆಡುವ ಅಭಿಯಾನಕ್ಕೆ ಚಾಲನೆ ನೀಡಿದರು. ೭೦೦ ಕಿ.ಮೀ ಉದ್ದದ ಅರಾವಳ್ಳಿ ಶ್ರೇಣಿಯನ್ನು ಮರು ಅರಣ್ಯೀಕರಣ ಮಾಡುವ ಗುರಿಯೊಂದಿಗೆ ಮಹತ್ವಾಕಾಂಕ್ಷೆಯ 'ಅರಾವಳ್ಳಿ ಗ್ರೀನ್ ವಾಲ್ ಪ್ರಾಜೆಕ್ಟ್' ರೂಪಿಸಲಾಗಿದೆ. ಪರಿಸರ ಸಂರಕ್ಷಣೆ ಮತ್ತು ಅರಣ್ಯೀಕರಣ ಪ್ರಯತ್ನಗಳಿಗೆ ಭಾರತದ ಬದ್ಧತೆಯ ಸಂಕೇತವಾಗಿ ನರೇಂದ್ರ ಮೋದಿ ಅವರು ಆಲದ ಸಸಿಯನ್ನು ನೆಟ್ಟರು. ಅರವಳ್ಳಿ ಗ್ರೀನ್ ವಾಲ್ ಯೋಜನೆ ದೆಹಲಿ, ರಾಜಸ್ಥಾನ, ಹರಿಯಾಣ ಮತ್ತು ಗುಜರಾತ್‌ನ ೨೯ ಜಿಲ್ಲೆಗಳಲ್ಲಿ ಅರಾವಳ್ಳಿ ಬೆಟ್ಟಗಳ ಸುತ್ತಲೂ ೫ ಕಿ.ಮೀ ಬಫರ್ ವಲಯವನ್ನು ಗುರಿಯಾಗಿರಿಸಿಕೊಂಡಿದೆ. ಇದು ಹಸಿರು ಹೊದಿಕೆ ಪ್ರಮಾಣವನ್ನು ಹೆಚ್ಚಿಸುವುದು, ಜೀವವೈವಿಧ್ಯತೆ ಪುನಃಸ್ಥಾಪಿಸುವುದು, ಮಣ್ಣಿನ ಫಲವತ್ತತೆಯನ್ನು ಸುಧಾರಿಸುವುದು, ಜಲಮೂಲಗಳನ್ನು ಸಂರಕ್ಷಿಸುವುದು ಮತ್ತು ಈ ಪ್ರದೇಶದಲ್ಲಿ ಹವಾಮಾನ ಸ್ಥಿತಿಸ್ಥಾಪಕತ್ವ ವೃದ್ಧಿಸುವುದರ ಮೇಲೆ ಕೇಂದ್ರೀಕರಿಸುತ್ತದೆ.

ಧ್ವನಿ: ಪ್ರಧಾನಮಂತ್ರಿ ನರೇಂದ್ರಮೋದಿ (೨೨ಸೆಕೆಂಡುಗಳು)

<><><><>

ವಿಶ್ವ ಪರಿಸರ ದಿನದ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮತ್ತು ಪ್ರದಾನಮಂತ್ರಿ ನರೇಂದ್ರಮೋದಿ ಅವರು ದೇಶದ ಪ್ರಜೆಗಳಿಗೆ ಪರಿಸರ ಸಂರಕ್ಷಣೆಯ ತಮ್ಮ ಬದ್ಧತೆಯನ್ನು ಪುನರ್ ವ್ಯಕ್ತಪಡಿಸಬೇಕೆಂದು ಕರೆ ನೀಡಿದ್ದಾರೆ. ರಾಷ್ಟ್ರಪತಿ ಅವರು, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪರಿಸರಕ್ಕೆ ಸಂಬಂಧಿಸಿದ ಪ್ರತಿಯೊಂದು ಕ್ರಿಯೆಗಳು ಭಿನ್ನವಾಗಿರಬೇಕು ಮತ್ತು ಸಾಮೂಹಿಕ ಪ್ರಯತ್ನಗಳಿಂದ ಮಾತ್ರ ನಾವು ಭವಿಷ್ಯದ ಪೀಳಿಗೆಗೆ ಹಸಿರನ್ನು ಕೊಡುಗೆಯಾಗಿ ನೀಡಬಹುದಾಗಿದೆ ಹಾಗಾಗಿ ಜನರು ಪರಿಸರ ಸ್ನೇಹಿ ಕ್ರಮಗಳಿಗೆ ಇನ್ನೂ ಹೆಚ್ಚಿನ ಉತ್ತೇಜನ ನೀಡಬೇಕು ಎಂದು ಹೇಳಿದ್ದಾರೆ. ಉಪರಾಷ್ಟ್ರಪತಿ ಜಗದೀಪ್

ಧನ್‌ಕರ್ ಎಲ್ಲಾ ಜೀವಿಗಳು ಸಹ ಭೂಮಿಯ ಆರೋಗ್ಯವನ್ನು ಅವಲಂಭಿಸಿದೆ ಹಾಗಾಗಿ ಎಲ್ಲರ ಭವಿಷ್ಯದ ದೃಷ್ಟಿಯಿಂದ ಹಸಿರು, ಶುದ್ಧ ಹಾಗೂ ಹೆಚ್ಚು ಸುಸ್ಥಿರ ಸಾಮೂಹಿಕ ಪ್ರಯತ್ನಗಳ ಮೂಲಕ ಉತ್ತಮ ಪರಿಸರವನ್ನು ಕಾಯ್ದುಕೊಳ್ಳಬೇಕಾಗಿದೆ ಎಂದು ತಿಳಿಸಿದ್ದಾರೆ. ಪ್ರದಾನಮಂತ್ರಿ ನರೇಂದ್ರಮೋದಿ ಅವರು, ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ವಿಡಿಯೋವನ್ನು ಹಂಚಿಕೊಂಡಿದ್ದಾರೆ ಮತ್ತು ಹಸಿರು ಹಾಗೂ ಉತ್ತಮ ಪರಿಸರಕ್ಕಾಗಿ ತಳ ಮಟ್ಟದಲ್ಲಿ ದುಡಿಯುತ್ತಿರುವ ಎಲ್ಲರ ಕಾರ್ಯವನ್ನು ಶ್ಲಾಘಿಸಿದ್ದಾರೆ.

<><><><>

ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಆಯುಷ್ ಸಚಿವಾಲಯ ಆಯೋಜಿಸಲಿರುವ ಯೋಗ ಸಂಗಮ-೨೦೨೫ ರಲ್ಲಿ ಭಾಗವಹಿಸಲು ದೇಶಾದ್ಯಂತ ೩೦ಸಾವಿರಕ್ಕೂ ಅಧಿಕ ಸಂಘಟನೆಗಳು ನೋಂದಣಿ ಮಾಡಿಕೊಂಡಿವೆ. ಶಿಕ್ಷಣ ಸಂಸ್ಥೆಗಳು, ಸರ್ಕಾರೇತರ ಸಂಘಟನೆಗಳು, ಕಾರ್ಪೊರೇಟ್ ಸಂಸ್ಥೆಗಳು, ಸರ್ಕಾರಿ ಸಂಸ್ಥೆಗಳು ಯೋಗದಿನಾಚರಣೆಯಲ್ಲಿ ಪಾಲ್ಗೊಳ್ಳಲು ಉತ್ಸುಕತೆಯಿಂದ ನೋಂದಣಿ ಮಾಡಿಕೊಂಡಿವೆ. ಜೂನ್ ೨೧ರಂದು ಅಂತಾರಾಷ್ಟ್ರೀಯ ಯೋಗ ದಿನವನ್ನು ವಿಶ್ವದಾದ್ಯಂತ ಆಚರಿಸಲಾಗುವುದು ಈ ವರ್ಷದ ಘೋಷವಾಕ್ಯ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬುದಾಗಿದೆ. ೧೧ನೇ ಆವೃತ್ತಿಯ ಅಂತಾರಾಷ್ಟ್ರೀಯ ಯೋಗದಿನದ ಅಂಗವಾಗಿ ಆಯುಷ್ ಸಚಿವಾಲಯ ಹಲವು ಕಾರ್ಯಕ್ರಮಗಳನ್ನು ಆಯೋಜಿಸಿದೆ. ಪ್ರಧಾನ ಕಾರ್ಯಕ್ರಮ ಯೋಗ ಸಂಗಮದಲ್ಲಿ ಭಾಗವಹಿಸಲು ನಿರ್ದಿಷ್ಟ ಪೋರ್ಟಲ್ ಅನ್ನು ಬಿಡುಗಡೆ ಮಾಡಲಾಗಿದೆ. ಆಸಕ್ತರು ಪೋರ್ಟಲ್ **Yoga.ayush.gov.in/yoga-sangama** ಇಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

<><><><>

ಪ್ರಧಾನಮಂತ್ರಿ ನರೇಂದ್ರಮೋದಿ ಅವರು, ನಾಳೆ ಪವಿತ್ರ ಪಟ್ಟಣ ಕತ್ರಾದಿಂದ ಕಾಶ್ಮೀರಕ್ಕೆ ಬಹುನಿರೀಕ್ಷಿತ ರೈಲು ಸೇವೆಗಳಿಗೆ ಚಾಲನೆ ನೀಡಲಿದ್ದಾರೆ. ಇದರಿಂದಾಗಿ ಕತ್ರಾ ಮತ್ತು ಬಾರಾಮುಲ್ಲ ನಡುವೆ ವಂದೇ ಭಾರತ್ ಎಕ್ಸ್ ಪ್ರೆಸ್ ರೈಲು ಸಂಚಾರ ಆರಂಭವಾಗಲಿದೆ. ಇದೇ ಮೊದಲ ಬಾರಿಗೆ ಜಮ್ಮುವಿನಿಂದ ಶ್ರೀನಗರಕ್ಕೆ ಹೈಟೆಕ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರ ಆರಂಭಕ್ಕೆ ಅನುವಾಗಲಿದೆ. ಅಲ್ಲದೆ, ಪ್ರದಾನಿ ಅವರು ಚಿನಾಬ್ ರೈಲ್ವೆ ಸೇತುವೆಯಿಂದ ಕತ್ರಾವರೆಗೆ ರೈಲಿನಲ್ಲಿ ಸಂಚರಿಸಿ ವಿಶ್ವದ ಅತೀ ಎತ್ತರದ ರೈಲ್ವೆ ಸೇತುವೆಯನ್ನು ವಿಕ್ಷೀಸಲಿದ್ದಾರೆ. ಇದು ದೇಶದ

ಇಂಜಿನಿಯರಿಂಗ್ ಚಮತ್ಕಾರ ಎಂದು ಬಣ್ಣಿಸಲಾಗುತ್ತಿದೆ. ಪ್ರಧಾನಿ ಅವರು ರೈಲಿನ ಮೂಲಕ ಕತ್ರಾಗೆ ಆಗಮಿಸಿ ಕತ್ರಾ-ಬಾರಾಮುಲ್ಲ ರೈಲು ಸೇವೆಗೆ ಚಾಲನೆ ನೀಡುವರು. ಈ ಸಂದರ್ಭದಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್, ಲೆಫ್ಟಿನೆಂಟ್ ಗೌರ್‍ನರ್ ಮನೋಜ್ ಸಿನ್ಹಾ, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಮತ್ತಿತರರು ಭಾಗವಹಿಸಲಿದ್ದಾರೆ.

ಧ್ವನಿ : ಪ್ರತಿನಿಧಿ, ಗುಲ್ಷನ್ ರೈನಾ (೩೮ ಸೆಕೆಂಡ್)

ಇದೇ ವೇಳೆ ಪ್ರಧಾನಿ ಅವರು ಉದಮ್ ಪುರ್-ಶ್ರೀನಗರ-ಬಾರಾಮುಲ್ಲ ರೈಲು ಸಂಪರ್ಕ - ಯುಎಸ್ ಬಿ ಆರ್ ಎಲ್ ಯೋಜನೆಯನ್ನು ಲೋಕಾರ್ಪಣೆ ಮಾಡುವರು. ಸುಮಾರು ೪೪ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ೨೭೨ ಕೀ.ಮೀ ಉದ್ದದ ರೈಲ್ವೆ ಯೋಜನೆಯನ್ನ ನಿರ್ಮಿಸಲಾಗಿದೆ. ಇದರಲ್ಲಿ ೩೬ ಸುರಂಗ, ೯೪೩ ಸೇತುವೆಗಳು ಒಳಗೊಂಡಿವೆ.

<><><><>

ಆರ್.ಸಿ.ಬಿ. ವಿಜಯೋತ್ಸವದ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ೧೧ ಜನರು ಸಾವನ್ನಪ್ಪಿದ ಪ್ರಕರಣದ ಕುರಿತು ಹೈಕೋರ್ಟ್ ಸ್ವಯಂ ಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ ದಾಖಲಿಸಿಕೊಂಡಿದೆ. ಇಂದು ಬೆಳಿಗ್ಗೆ ಮಾಧ್ಯಮಗಳು ಹಾಗೂ ವಕೀಲರಿಂದ ಘಟನೆಯ ಬಗ್ಗೆ ಮಾಹಿತಿಯನ್ನು ಪಡೆದ ಬಳಿಕ ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ.ಕಾಮೇಶ್ವರ ರಾವ್ ಅವರಿಂದ ನ್ಯಾಯಪೀಠ ಸ್ವಯಂಪ್ರೇರಿತ ಪ್ರಕರಣ ದಾಖಲಿಸಲು ಆದೇಶಿಸಿತು. ಅಲ್ಲದೆ, ಮಧ್ಯಾಹ್ನ ೨.೩೦ಕ್ಕೆ ವಿಚಾರಣೆಯನ್ನು ನಿಗದಿಪಡಿಸಿ, ಅಷ್ಟರಲ್ಲಿ ಸರ್ಕಾರ ಕೈಗೊಂಡಿದ್ದ ಭದ್ರತಾ ಕ್ರಮಗಳ ಬಗ್ಗೆ ಸಮಗ್ರ ಮಾಹಿತಿ ನೀಡುವಂತೆ ರಾಜ್ಯ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರಿಗೆ ಸೂಚನೆ ನೀಡಿತು. ಜೊತೆಗೆ ಘಟನೆಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿ ನ್ಯಾಯಾಲಯ ಇದನ್ನು ಗಂಭೀರವಾಗಿ ಪರಿಗಣಿಸುತ್ತದೆ ಎಂದು ನ್ಯಾಯಪೀಠ ಹೇಳಿತು. ಈ ಮಧ್ಯೆ ನಿನ್ನೆ ಘಟನೆಯಲ್ಲಿ ಮೃತಪಟ್ಟ ೧೧ ಮಂದಿಯ ಮೃತ ದೇಹಗಳನ್ನು ಅವರ ಕುಟುಂಬದವರಿಗೆ ಹಸ್ತಾಂತರಿಸಲಾಗಿದೆ.

<><><><>

ಶಶಿತರೂರ್ ನೇತೃತ್ವದ ಭಾರತೀಯ ಸಂಸದರ ಸರ್ವಪಕ್ಷಗಳ ನಿಯೋಗ ವಾಷಿಂಗ್ಟನ್ ನಲ್ಲಿ ನಿನ್ನೆ ಅಮೇರಿಕಾದ ಅಧಿಕಾರಿಗಳು ಹಾಗೂ ನೀತಿ ನಿರೂಪಕರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>